# <u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ</u>

<u>ದಿನಾಂಕ 31 ನೇ ಡಿಸೆಂಬರ್ 2025</u>

**<u>ಸಿ.ಸಿ. 2826/2025</u>**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ಶಶಿಕುಮಾರ್ ಕೆ.ಸಿ,
ಬಿನ್ ಲೇಟ್.ಚಿಂದಗಿರಿಗೌಡ, 36 ವರ್ಷ,
ವಾಸಃ ಕೊತ್ತತ್ತಿ ಗ್ರಾಮ,
ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ.

**<u>ಆರೋಪಣೆ</u>**

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 13.07.2025 ರಂದು ಬೆಳಿಗ್ಗೆ 7.45 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯ, ಹುಣಸಗಳ್ಳಿ ಗ್ರಾಮದ ಕೆಂಪಮ್ಮ ಕೋಂ ಚೊಟ್ಟೆ ತಿಮ್ಮೇಗೌಡರವರ ವಾಸದ ಮನೆಯ ಮುಂಭಾಗ ಹಾದು ಹೋಗಿರುವ ಹುಣಸಗಳ್ಳಿ-ನೇರಳಕೆರೆ ರಸ್ತೆಯಲ್ಲಿ ಆರೋಪಿತರಾದ ನೀವು ಚಾಸಾ -10 ಹೆಚ್.ಬಿ.ಅನಿಲ್ ರವರು ಬಾಬ್ತು ಹಿರೋ ಹೋಂಡಾ ಸ್ಟೆಂಡರ್ ಪ್ಲಸ್ ಮೋಟಾರು ಸೈಕಲ್ ಸಂಖ್ಯೆ ಕೆಎ-09-ಜೆಜೆ-4018 ನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಎರಡನೇಯದಾಗಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿಯಾದ ನೀವು ಮೋಟಾರು ಸೈಕಲ ಅನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಟಾರ್ ರಸ್ತೆಗೆ ಕೂಡುವ ಜಮೀನಿಗೆ ಹೋಗುವ ಒಂಟಿ ಕಚ್ಚಾ ಮಣ್ಣಿನ ರಸ್ತೆಯಲ್ಲಿ ಜಮೀನಿಗೆ ಹೋಗಿ ರಸ್ತೆ ಹುಣಸಗಹಳ್ಳಿ ಗ್ರಾಮಕ್ಕೆ ಹೋಗಲು ಚಾಸಾ-9 ರವರ ಬಾಬ್ತು ಹಿರೋ ಹೋಂಡಾ ಸ್ಟೆಂಡರ್ ಪ್ಲಸ್ ಮೋಟಾರು ಸೈಕಲ್ ಸಂಖ್ಯೆ ಕೆಎ-55-

ಇಸಿ–3547 ನಲ್ಲಿ ನಿಂತಿದ್ದ ಚಾಸಾ–2 ಮನೋಹರ್ ಹೆಚ್.ಬಿ ರವರಿಗೆ ಡಿಕ್ಕಿ ಮಾಡಿದ ಪರಿಣಾಮ, ಚಾಸಾ–2 ರವರ ಎಡಕೈನ ಮೊಣಕೈನ ಮೂಳೆ ಮುರಿದು ತೀವ್ರ ಸ್ವರೂಪದ ಗಾಯ ಉಂಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

## **ಆರೋಪಿಯ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ , ಟಿ.ನರಸೀಪುರ.**

**ಆರೋಪಿ ಸಹಿಃ**